ದಿನಾಂಕ 05.07.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

<u>ಮುಖ್ಯ ವಿಚಾರಣೆಃ- ಅರ್ಜಿದಾರರ ಪರ ವಕೀಲರಿಂದಃ-</u>

ನಾನು ಈ ದಾವೆಯಲ್ಲಿ ಅರ್ಜಿದಾರರ ಪರ ಸಾಕ್ಷಿದಾರನಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಈ ದಿನ ನ್ಯಾಯಾಲಯದಲ್ಲಿ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿದೆ.

<u>ಪಾಟೀ ಸವಾಲುಃ ಶ್ರೀ.ಎ.ಬಿ. ವಕೀಲರಿಂದಃ</u>

ಅಪಘಾತವಾದ ಬಳಿಕ ನಾನು ಘಟನಾ ಸ್ಥಳಕ್ಕೆ ಹೋಗಿರುತ್ತೇನೆ. ನಾನು ಅರ್ಜಿದಾರರನ್ನು ಗೋಣಿಕೊಪ್ಪದ ಆಸ್ಪತ್ರೆಗೆ ದಾಖಲಿಸಿರುತ್ತೇನೆ. ಅರ್ಜಿದಾರರಿಗೆ ನೀಡಿದಂತಹ ಚಿಕಿತ್ಸೆಯ ಬಗ್ಗೆ ಹಾಗೂ ಅವರು ಬರಿಸಿದ ಚಿಕಿತ್ಸಾ ವೆಚ್ಚಗಳ ಬಗ್ಗೆ ನನಗೆ ಖುದ್ದು ಮಾಹಿತಿ ಇಲ್ಲದೇ ಇದ್ದರೂ ಸಹ ಅವರು ನಮ್ಮ ಊರಿನವರಾಗಿರುವುದರಿಂದ ಅವರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.